ಸ್ವಚ್ಛ ಭಾರತ
ಒಂದು ಹೆಜ್ಜೆ ಸ್ವಚ್ಛತೆ ಕಡೆ

ಕರ್ನಾಟಕ ಸರ್ಕಾರ

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಗ್ರೂಪ್ 'ಡಿ' ವೃಂದದ ನೇರನೇಮಕಾತಿ ಸಮಿತಿ, ಕೊಪ್ಪಳ

**ಸಂಖ್ಯೆ:ಹಿಂವಕಇಕೊ:ಸಿಬ್ಬಂದಿ :ಸಿಆರ್-3 :2016-17** **ದಿನಾಂಕ: 16-08-2017**

## -:: ಪ್ರಕಟಣೆ ::-

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ಖಾಲಿ ಇರುವ ಅಡುಗೆಯವರು/ ಅಡುಗೆ ಸಹಾಯಕರ ಹುದ್ದೆಗಳಿಗೆ ನೇರ ನೇಮಕಾತಿ ಮುಖಾಂತರ ಆಯ್ಕೆಯಾದ ಅಭ್ಯರ್ಥಿಗಳಿಗೆ ದಿನಾಂಕ:21.08.2017 ರಂದು ಮಧ್ಯಾಹ್ನ 3.00 ರಿಂದ 5.30 ಘಂಟೆಯ ವರೆಗೆ ಮೂಲ ದಾಖಲೆಗಳನ್ನು ಹಾಜರ ಪಡಿಸಲು ಆದೇಶಿಸಲಾಗಿರುತ್ತದೆ. ಅದರನ್ವಯ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕೀಯರ ವಸತಿ ನಿಲಯಗಳ ಸಂಕೀರ್ಣ, ಕವಲೂರು ನಗರ, ಹರಿಪ್ರಿಯಾ ಎಕ್ಸ್‌ಟೆನ್‌ಷನ್ ಏರಿಯಾ, ಕೊಪ್ಪಳ ಇಲ್ಲಿ ಪರಿಶೀಲನೆ ನಡೆಸಲಾಗುತ್ತದೆ. ಸದರಿ ದಿನದಂದು ತಪ್ಪದೇ ಈ ಕೆಳಕಂಡ ಮೂಲ ದಾಖಲಾತಿಗಳೊಂದಿಗೆ ಹಾಜರಾಗಲು ತಿಳಿಯಪಡಿಸಿದೆ. **ಹಾಗೂ ಹೆಚ್ಚಿನ ಮಾಹಿತಿಯನ್ನು ಜಿಲ್ಲಾ ವೆಬ್‌ಸೈಟ್ www.koppal.nic.in ನಲ್ಲಿ ನೋಡಲು ಹಾಗೂ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೊಪ್ಪಳ ಕಛೇರಿಗೆ ಸಂಪರ್ಕಿಸಲು ತಿಳಿಯಪಡಿಸಿದೆ.**

1. ದಾಖಲಾತಿ ಪರಿಶೀಲನೆ ಹಾಜರಾತಿ ಸೂಚನಾ ಪತ್ರ.
2. ಆನ್-ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.
3. ಎಸ್.ಎಸ್.ಎಲ್.ಸಿ ಅಂಕಪಟ್ಟಿ KSEEB/CBSC/ICSE ವಿದ್ಯಾರ್ಹತೆಯ ಅಂಕಪಟ್ಟಿ.
4. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆಯ ಪ್ರಮಾಣ ಪತ್ರ (ಟಿ.ಸಿ)/ಜನ್ಮ ದಿನಾಂಕವನ್ನು ತೋರಿಸುವಂತಹ ದಾಖಲೆಯ ಉದ್ಧೃತ ಭಾಗ.
5. ಮೀಸಲಾತಿ ಸೌಲಭ್ಯ ಕೋರಿದ್ದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ ಪ್ರವರ್ಗ-1ರ (ಅ-1) ಅಭ್ಯರ್ಥಿಗಳು ನಮೂನೆ-'ಇ' ರಲ್ಲಿ, ಪ್ರವರ್ಗ 2A, 2B, 3A, 3B ಅಭ್ಯರ್ಥಿಗಳು ನಮೂನೆ 'ಎಫ್' ರಲ್ಲಿ ತಹಶೀಲ್ದಾರ್ ರಿಂದ ಪಡೆದಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
6. ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ (ಶಾಲೆಯ ಮುಖ್ಯೋಪಾಧ್ಯಯರಿಂದ ಪಡೆದು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ರುಜು ಪಡೆದಿರಬೇಕು) ಹಾಗೂ ಸಾಮಾನ್ಯ ವರ್ಗದ ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ತಹಶೀಲ್ದಾರ್ ರಿಂದ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪಡೆದ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ)
7. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂ:I & II ಆದೇಶ ಸಂಖ್ಯೆ DPAR 43/HKC/2013 ದಿ: 29.01.2014 ರಂತೆ ಸಕ್ಷಮ ಪ್ರಾಧಿಕಾರ ನೀಡಿದ ಅರ್ಹತಾ ಪ್ರಮಾಣ ಪತ್ರ ಅನುಬಂಧ-ಎ (ಅನುಚ್ಛೇಧ-371 (ಜೆ) ಮೇರೆಗೆ (3)(3) ನೇ ನಿಯಮದಂತೆ) (ಅನ್ವಯಿಸುವವರಿಗೆ ಮಾತ್ರ).
8. ಶಾಲೆಯ ಮುಖ್ಯೋಪಾಧ್ಯಯರಿಂದ ಪಡೆದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ರುಜು ಪಡೆದಿರುವ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (1ನೇ ತರಗತಿಯಿಂದ 10ನೇ ತರಗತಿಯವರೆಗೆ).
9. ಸಕ್ಷಮ ಪ್ರಾಧಿಕಾರದಿಂದ ಪಡೆದ ಯೋಜನಾ ನಿರಾಶ್ರಿತರ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ).
10. ಶೇ.40 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ನಿಗಧಿತ ನಮೂನೆಯಲ್ಲಿ ಪಡೆದ ಅಂಗವಿಕಲ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ).
11. ಅಂಗವಿಕಲರ ಮೀಸಲಾತಿ ಪಡೆಯಲಿಚ್ಚಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ ಹಾಜರು ಪಡಿಸುವುದು (ಅರ್ಜಿ ಸಲ್ಲಿಸುವ ಪೂರ್ವದಲ್ಲಿ ಪಡೆದಿರುವ ಪ್ರಮಾಣ ಪತ್ರ)
12. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು ಇವರುಗಳು ಸಕ್ಷಮ ಪ್ರಾಧಿಕಾರಿಂದ ಪಡೆದ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ).
13. ಅಭ್ಯರ್ಥಿಯು Voter ID/Passport/DL/Pan Card/Bank Passbook/Adhar card etc ಇವುಗಳಲ್ಲಿ ಯಾವುದಾದರೂ ಒಂದು ಗುರುತಿನ ಚೀಟಿ ತರುವುದು

16/8/17

**ಜಿಲ್ಲಾ ಅಧಿಕಾರಿಗಳು,**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ**
**ಗ್ರೂಪ್ 'ಡಿ' ವೃಂದದ ನೇರನೇಮಕಾತಿ ಸಮಿತಿ, ಕೊಪ್ಪಳ**

E: 2015-16/ M.M/Sibbandi Mahiti/ Group D requipment/ Letters